**All India Radio: Bangalore**
**National Bulletin In Kannada**
**26.04.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.04.2026  7.35 am**

**<>><><*><><<>**

ಮುಖ್ಯಾಂಶಗಳು

**೧. ಆಕಾಶವಾಣಿ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**೨. ಪಶ್ಚಿಮ ಬಂಗಾಳ ವಿಧಾನಸಭೆಯ ಎರಡನೇ ಹಂತದ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳ ನಾಯಕರಿಂದ ಬಿರುಸುಗೊಂಡ ಪ್ರಚಾರ**

**೩. ದೇಶಾದ್ಯಂತ ಪೆಟ್ರೋಲಿಯಂ ಉತ್ಪನ್ನಗಳು ಮತ್ತು ಎಲ್‌ಪಿಜಿ ನಿರಂತರ ಲಭ್ಯತೆ ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರದಿಂದ ಹಲವು ಕ್ರಮ**

**೪. ಮಹಿಳಾ ಟಿ-೨೦ ಕ್ರಿಕೆಟ್; ದಕ್ಷಿಣ ಆಫ್ರಿಕಾ ವಿರುದ್ಧ ಭಾರತಕ್ಕೆ ೧೪ ರನ್‌ಗಳ ಜಯ**

**<>><><*><><<>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**<>><><*><><<>**

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಎರಡನೇ ಹಂತದ ಪ್ರಚಾರವು ರಾಜ್ಯಾದ್ಯಂತ ತೀವ್ರಗೊಂಡಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು ರ್‍ಯಾಲಿಗಳು, ರೋಡ್ ಶೋಗಳು ಮತ್ತು ಸಾರ್ವಜನಿಕ ಸಭೆಗಳ ಮೂಲಕ ಮತದಾರರನ್ನು ಸೆಳೆಯಲು ಪ್ರಯತ್ನಿಸುತ್ತಿದ್ದಾರೆ. ಹಿರಿಯ ಬಿಜೆಪಿ ನಾಯಕ ನರೇಂದ್ರ ಮೋದಿ ಅವರು ಪಕ್ಷದ ಅಭ್ಯರ್ಥಿಗಳನ್ನು ಬೆಂಬಲಿಸಿ ಇಂದು ಹಲವಾರು ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಿನ್ನೆ, ಪೂರ್ವ ಬುರ್ದ್ವಾನ್ ಜಮಾಲ್‌ಪುರದಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಹಿರಿಯ ಬಿಜೆಪಿ ನಾಯಕ ಅಮಿತ್ ಶಾ, ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ, ಏಕರೂಪ ನಾಗರಿಕ ಸಂಹಿತೆ ಮತ್ತು ಏಳನೇ ವೇತನ ಆಯೋಗವನ್ನು ಜಾರಿಗೆ ತರಲಾಗುವುದು ಎಂದು ಭರವಸೆ ನೀಡಿದರು. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣವನ್ನು ಒದಗಿಸುವುದಾಗಿ ಮತ್ತು ಮಾತುವಾ ಸಮುದಾಯಕ್ಕೆ ಬೆಂಬಲವನ್ನು ಪುನರುಚ್ಚರಿಸಿದರು. ತೃಣಮೂಲ ಕಾಂಗ್ರೆಸ್‌ನ ನಾಯಕರಾದ ಮಮತಾ ಬ್ಯಾನರ್ಜಿ ಮತ್ತು ಅಭಿಷೇಕ್ ಬ್ಯಾನರ್ಜಿ ಅವರ ಮತದಾರರ ಪಟ್ಟಿಗೆ ೩೨ ಲಕ್ಷ ಹೆಸರುಗಳು ಮರುಸ್ಥಾಪಿಸಿದ ಪಕ್ಷದ ಕಾನೂನು ಹೋರಾಟವನ್ನು ಪ್ರಸ್ತಾಪಿಸಿದರು ಶ್ರೀರಾಂಪುರದಲ್ಲಿ ಪ್ರಚಾರ ನಡೆಸಿದ ಹಿರಿಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ತಮ್ಮ ಪಕ್ಷವು ಸಂವಿಧಾನ ಮತ್ತು ಏಕತೆಗೆ ಬದ್ಧವಾಗಿದ್ದರೂ, ಬಿಜೆಪಿ ದ್ವೇಷ ಮತ್ತು ವಿಭಜನೆಯ ರಾಜಕೀಯವನ್ನು ಅನುಸರಿಸುತ್ತಿದೆ ಎಂದು ಆರೋಪ ಮಾಡಿದರು.

<><><*><><<>

ದೇಶಾದ್ಯಂತ ಪೆಟ್ರೋಲಿಯಂ ಉತ್ಪನ್ನಗಳು ಮತ್ತು ಎಲ್‌ಪಿಜಿ ನಿರಂತರ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಗೃಹಬಳಕೆ ಎಲ್‌ಪಿಜಿ ಪೂರೈಕೆಗೆ ಆದ್ಯತೆ ನೀಡಲಾಗಿದೆ. ಯಾವುದೇ ಎಲ್‌ಪಿಜಿ ವಿತರಕರಲ್ಲಿ ಕೊರತೆಯಾದ ವರದಿಯಾಗಿಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ದೇಶಾದ್ಯಂತ ಆನ್‌ಲೈನ್ ಎಲ್‌ಪಿಜಿ ಸಿಲಿಂಡರ್ ಬುಕಿಂಗ್‌ಗಳು ಸುಮಾರು ಶೇಕಡಾ ೯೯ ಕ್ಕೆ ಏರಿವೆ ಮತ್ತು ಒಟಿಪಿ ಆಧಾರಿತ ವಿತರಣೆಗಳು ಶೇಕಡಾ ೯೪.೫ ಕ್ಕಿಂತ ಹೆಚ್ಚಾಗಿದೆ. ಮಾರ್ಚ್ ೨೦೨೬ ರಿಂದ, ೫.೩೬ ಲಕ್ಷಕ್ಕೂ ಹೆಚ್ಚು ಪಿಎನ್‌ಜಿ ಸಂಪರ್ಕಗಳನ್ನು ಅನಿಲೀಕರಿಸಲಾಗಿದೆ ಮತ್ತು ಹೆಚ್ಚುವರಿ ೨.೬೧ ಲಕ್ಷ ಸಂಪರ್ಕಗಳಿಗೆ ಮೂಲಸೌಕರ್ಯವನ್ನು ರಚಿಸಲಾಗಿದೆ, ಇದು ಒಟ್ಟು ೭.೯೭ ಲಕ್ಷ ಸಂಪರ್ಕಗಳಿಗೆ ತಲುಪಿದೆ ಎಂದು ಸಚಿವಾಲಯ ತಿಳಿಸಿದೆ.

<><><*><><<>

ಕೈಗಾರಿಕಾ ಮತ್ತು ಆಂತರಿಕ ವ್ಯಾಪಾರ ಉತ್ತೇಜನ ಇಲಾಖೆ-ಡಿಪಿಐಐಟಿ ೧೦ ಸಾವಿರ ಕೋಟಿ ರೂಪಾಯಿಗಳ 'ಸ್ಟಾರ್ಟ್‌ಅಪ್ ಇಂಡಿಯಾ ಫಂಡ್, ಆಫ್ ಫಂಡ್ಸ್ ೨.೦' ಗಾಗಿ ಕಾರ್ಯಾಚರಣಾ

ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಭಾರತದ ನವೋದ್ಯಮ ಪರಿಸರ ವ್ಯವಸ್ಥೆಯಲ್ಲಿ ಬಂಡವಾಳ ಹರಿವಿನ ದಕ್ಷತೆಯನ್ನು ಸುಧಾರಿಸುವ ಉದ್ದೇಶದಿಂದ, ನಿಧಿ ನಿಯೋಜನೆ, ಆಡಳಿತ ಮತ್ತು ಮೇಲ್ವಿಚಾರಣೆಗಾಗಿ ಸ್ಪಷ್ಟವಾಗಿ ವ್ಯಾಖ್ಯಾನಿಸಲಾದ ಕಾರ್ಯವಿಧಾನಗಳ ಮೂಲಕ ಕಾರ್ಪಸ್ ಅನ್ನು ಕಾರ್ಯಗತಗೊಳಿಸಲು ಮಾರ್ಗಸೂಚಿಗಳು ರಚನಾತ್ಮಕ ಚೌಕಟ್ಟನ್ನು ರೂಪಿಸಿವೆ.

<>><><*><><<>

ಅರ್ಥಶಾಸ್ತ್ರಜ್ಞ ಅಶೋಕ್ ಕುಮಾರ್ ಲಾಹಿರಿ ಅವರು, ನೀತಿ ಆಯೋಗದ ಉಪಾಧ್ಯಕ್ಷರಾಗಿ ನೇಮಕಗೊಂಡಿದ್ದಾರೆ. ಅವರು ಪ್ರಸ್ತುತ ಉಪಾಧ್ಯಕ್ಷರಾದ ಸುಮನ್.ಕೆ ಬೆರಿ ಅವರ ಸ್ಥಾನವನ್ನು ಅಲಂಕರಿಸಲಿದ್ದಾರೆ. ಇದೇ ವೇಳೆ, ಸರ್ಕಾರ, ರಾಜೀವ್ ಗೌಬಾ, ಕೆ.ವಿ.ರಾಜು, ಗೋವರ್ಧನ್ ದಾಸ್, ಎಂ.ಶ್ರೀನಿವಾಸ್, ಅಭಯ್ ಕರಂದಿಕರ್ ಅವರನ್ನು ನೀತಿ ಆಯೋಗದ ಪೂರ್ಣಕಾಲಿಕ ಸದಸ್ಯರನ್ನಾಗಿ ನೇಮಿಸಿದೆ. ಅಶೋಕ್ ಕುಮಾರ್ ಲಾಹಿರಿ ಅವರು, ಈ ಹಿಂದೆ ಭಾರತದ ೧೨ನೇ ಮುಖ್ಯ ಆರ್ಥಿಕ ಸಲಹೆಗಾರರಾಗಿ ಸೇವೆ ಸಲ್ಲಿಸಿದ್ದಾರೆ. ಅಲ್ಲದೆ, ೧೫ನೇ ಹಣಕಾಸು ಆಯೋಗದ ಸದಸ್ಯರಾಗಿಯೂ ಕಾರ್ಯ ನಿರ್ವಹಿಸಿದ್ದಾರೆ. ವಿಶ್ವಬ್ಯಾಂಕ್ ಮತ್ತು ಅಂತಾರಾಷ್ಟ್ರೀಯ ಹಣಕಾಸು ನಿಧಿಯಂತಹ ಅಂತಾರಾಷ್ಟ್ರೀಯ ಸಂಸ್ಥೆಗಳಲ್ಲಿ ಉನ್ನತಮಟ್ಟದ ಹುದ್ದೆಗಳನ್ನು ಅಲಂಕರಿಸಿದ್ದರು. ನೀತಿ ಆಯೋಗದ ನೂತನ ಉಪಾಧ್ಯಕ್ಷರು ಮತ್ತು ಪೂರ್ಣಕಾಲಿಕ ಸದಸ್ಯರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಅತ್ಯಂತ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಶ್ರೀ ರಾಮ್ ವಾಣಿಜ್ಯ ಕಾಲೇಜು ಆಡಳಿತ ಮಂಡಳಿಯ ನಿಯೋಗವನ್ನು ಭೇಟಿಯಾದರು. ಈ ವರ್ಷವು ಸಂಸ್ಥೆ ಶತಮಾನೋತ್ಸವನ್ನು ಆಚರಿಸುತ್ತಿರುವ ಹಿನ್ನೆಲೆ ಸಾಮಾಜಿಕ ಜಾಲತಾಣದಲ್ಲಿ ಪ್ರಧಾನ ಮಂತ್ರಿಗಳು ಸಂಸ್ಥೆಗೆ ಶುಭಾಶಯ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಸ್ಮರಣಾರ್ಥ ಅಂಚೆ ಚೀಟಿಯನ್ನು ಸಹ ಬಿಡುಗಡೆ ಮಾಡಲಾಗಿದೆ.

<>><><*><><<>

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವರ ಚಿಂತನ ಶಿಬಿರವು ಶ್ರೀನಗರದಲ್ಲಿ ಪ್ರಾರಂಭವಾಯಿತು. ಶಿಬಿರದಲ್ಲಿ ಸಂಘಟಿತ ಕ್ರಮ, ವ್ಯವಸ್ಥಿತ ಸುಧಾರಣೆಗಳು, ನೀತಿ ಒಮ್ಮುಖ ಮತ್ತು ತಳಮಟ್ಟದ ಅನುಷ್ಠಾನದ ಮೂಲಕ ಭಾರತದ ಕ್ರೀಡಾ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಕುರಿತು ಕೇಂದ್ರೀಕೃತ ಚರ್ಚೆಗಳು ನಡೆದವು. ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ

ಡಾ.ಮನ್ಸುಖ್ ಮಾಂಡವಿಯಾ ಅವರು, ಭಾರತ, ಜಾಗತಿಕ ಕ್ರೀಡಾ ಶಕ್ತಿ ಕೇಂದ್ರವಾಗಲು ನಮ್ಮ ೧೦ ವರ್ಷಗಳ ಮಾರ್ಗಸೂಚಿ ಕೇವಲ ಕಾಗದದ ಮೇಲೆ ಉಳಿಯಬಾರದು, ಅದು ಪ್ರತಿ ಆಟದ ಮೈದಾನ, ಪ್ರತಿ ಜಿಲ್ಲೆ ಮತ್ತು ಪ್ರತಿ ಯುವ ಕನಸಿನಲ್ಲಿ ಜೀವಂತವಾಗಿರಬೇಕು ಹೇಳಿದ್ದಾರೆ.

**<>><><*><><<>**

ಕೈರೋದಲ್ಲಿ ನಡೆದ ಜೂನಿಯರ್ ಶೂಟಿಂಗ್ ವಿಶ್ವಕಪ್‌ನಲ್ಲಿ ಭಾರತೀಯ ಶೂಟರ್‌ಗಳು ತಮ್ಮ ಪ್ರಾಬಲ್ಯ ಮುಂದುವರಿಸಿ ಒಂದು ಚಿನ್ನ ಮತ್ತು ಒಂದು ಕಂಚಿನ ಪದಕ ಗೆದ್ದಿದ್ದಾರೆ. ೧೦ ಮೀಟರ್ ಏರ್ ಪಿಸ್ತೂಲ್ ಮಿಶ್ರ ತಂಡ ಸ್ಪರ್ಧೆಯಲ್ಲಿ ವಂಶಿಕಾ ಚೌಧರಿ ಮತ್ತು ಚಿರಾಗ್ ಶರ್ಮಾ ಚಿನ್ನದ ಪದಕ ಗೆದ್ದರು. ಮೋಹಿನಿ ಸಿಂಗ್ ಮತ್ತು ಹಿಮಾಂಶು ರಾಣಾ ಕಂಚಿನ ಪದಕ ಗೆದ್ದರು. ಭಾರತವು ಐದು ಚಿನ್ನ, ಐದು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

**<>><><*><><<>**

ಜೋಹಾನ್ಸ್‌ಬರ್ಗ್‌ನಲ್ಲಿ ನಿನ್ನೆ ರಾತ್ರಿ ನಡೆದ ನಾಲ್ಕನೇ ಮಹಿಳಾ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಭಾರತ ೧೪ ರನ್‌ಗಳ ಜಯ ಸಾಧಿಸಿದೆ. ದೀಪ್ತಿ ಅಜೇಯ ೩೬ ರನ್‌ಗಳೊಂದಿಗೆ ಭಾರತವನ್ನು ೧೮೦ ರನ್‌ಗಳ ಗಡಿ ದಾಟಿಸುವಲ್ಲಿ ಪಂದ್ಯವನ್ನು ಗೆಲುವಿನತ್ತ ಮುನ್ನಡೆಸಿದರು. ದೀಪ್ತಿ ಶರ್ಮಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

**<>><><*><><<>**

ಡೆನ್ಮಾರ್ಕ್‌ನ ಹಾರ್ಸೆನ್ಸ್‌ನಲ್ಲಿ ನಿನ್ನೆ ನಡೆದ ಉಬರ್ ಕಪ್ ಬ್ಯಾಡ್ಮಿಂಟನ್ ಫೈನಲ್‌ನ ಎರಡನೇ ಗುಂಪಿನ ಸ್ಪರ್ಧೆಯಲ್ಲಿ ಭಾರತೀಯ ಮಹಿಳಾ ತಂಡವು, ಉಕ್ರೇನ್ ವಿರುದ್ಧ ೩-೦ ಅಂತರದ ಪ್ರಬಲ ಗೆಲುವು ಸಾಧಿಸಿತು.

**<>><><*><><<>**

ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ೫ ವಿಕೆಟ್‌ಗಳಿಂದ ಜಯ ದಾಖಲಿಸಿತು. ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ೨ ಪಂದ್ಯಗಳು ಆಯೋಜನೆಗೊಂಡಿದೆ. ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಭಾರತ ರತ್ನ ಶ್ರೀ

ಅಟಲ್ ಬಿಹಾರಿ ವಾಜಪೇಯಿ ಏಕಾನ ಕ್ರೀಡಾಂಗಣದಲ್ಲಿ ಇಂದು ಸಂಜೆ ೭.೩೦ಕ್ಕೆ ಪ್ರಾರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ಲಖ್ನೋ ಸೂಪರ್ ಜೈಂಟ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಸೆಣಸಲಿವೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨.೦೫ ಕ್ಕೆ ><><<>**